# ಮೈಸೂರು ವಿಶ್ವವಿದ್ಯಾನಿಲಯ

Estd-1916
(Re-accredited by NAAC at "A" Grade with a CGPA of 3.01)
(overall Ranking 54th and University Ranking 33rd in NIRF Ranking-2022)

ಸಂಖ್ಯೆ: ಪ.ವಿ.8.4/ಯುಜಿ/NEP/87/2021-22

ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ
ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು-570 005
ದಿನಾಂಕ: 08-03-2023

## ಸುತ್ತೋಲೆ

ವಿಷಯ: ಫೆಬ್ರವರಿ/ಮಾರ್ಚ್-2023ರಲ್ಲಿ ನಡೆಯುತ್ತಿರುವ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯಕ್ಕೆ ಮೌಲ್ಯಮಾಪಕರುಗಳನ್ನು ಕಳುಹಿಸಿಕೊಡುವ ಬಗೆಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಫೆಬ್ರವರಿ/ಮಾರ್ಚ್-2023ರಲ್ಲಿ ವಿವಿಧ ಸ್ನಾತಕ ಪರೀಕ್ಷೆಗಳು ಪ್ರಾರಂಭವಾಗಿರುವುದು ಸರಿಯಷ್ಟೆ. ಈ ಸಂಬಂಧ **ದಿನಾಂಕ: 13-03-2023ರಿಂದ** NEP/CBCS ಪದ್ಧತಿಯ ಉತ್ತರಪತ್ರಿಕೆಗಳ ಮೌಲ್ಯಮಾಪನ ಕಾರ್ಯಗಳು ವೇಳಾಪಟ್ಟಿಯಂತೆ ನಡೆಸಲು ಉದ್ದೇಶಿಸಲಾಗಿದೆ. ಆದುದರಿಂದ, ಸದರಿ ಮಾಲ್ಯಮಾಪನ ಕಾರ್ಯಗಳಿಗೆ ನಿಮ್ಮ-ನಿಮ್ಮ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಯುಜಿಸಿ/ನಾನ್ ಯುಜಿಸಿ ವೇತನ ಪಡೆಯುತ್ತಿರುವ ಹಾಗೂ ಸ್ವಾಯತ್ತ/ಸರ್ಕಾರಿ ಅನುದಾನಿತ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಅಧ್ಯಾಪಕರುಗಳನ್ನು ಸಕಾಲಕ್ಕೆ ಕಳುಹಿಸಿಕೊಟ್ಟು ನಿಗದಿತ ಅವಧಿಯೊಳಗೆ ಮೌಲ್ಯಮಾಪನ ಕಾರ್ಯಗಳನ್ನು ಪೂರ್ಣಗೊಳಿಸಲು ಸಹಕರಿಸಬೇಕಾಗಿ ತಿಳಿಸಲಾಗಿದೆ. ಯಾವ ಕಾಲೇಜಿನಿಂದ ಅಧ್ಯಾಪಕರುಗಳು ಮೌಲ್ಯಮಾಪನ ಕಾರ್ಯಕ್ಕೆ ಹಾಜರಾಗುವುದಿಲ್ಲವೊ ಅಥವಾ ಗೈರುಹಾಜರಾಗುತ್ತಾರೋ ಅಂತಹ ಕಾಲೇಜುಗಳ ಫಲಿತಾಂಶವನ್ನು ತಡೆಹಿಡಿಯಲಾಗುವುದು.

ಈ ವಿಷಯವನ್ನು ನಿಮ್ಮ ಕಾಲೇಜಿನ ಎಲ್ಲಾ ಅಧ್ಯಾಪಕರುಗಳ ಗಮನಕ್ಕೆ ಕಡ್ಡಾಯವಾಗಿ ತರಬೇಕೆಂದು ಈ ಮೂಲಕ ಸೂಚಿಸಲಾಗಿದೆ.

9/3/23
ಕುಲಸಚಿವ (ಪರೀಕ್ಷಾಂಗ)

ಇವರಿಗೆ,

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರು / ಮುಖ್ಯಸ್ಥರುಗಳಿಗೆ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ವಿನೋಬಾ ರಸ್ತೆ, ಮೈಸೂರು-**ಮೌಲ್ಯಮಾಪನ ಕಾರ್ಯಕ್ಕೆ ಅಧ್ಯಾಪಕರುಗಳನ್ನು ನಿಯೋಜಿಸುವ ಕುರಿತು ಪ್ರಾಂಶುಪಾಲರುಗಳಿಗೆ ಸೂಕ್ತ ನಿರ್ದೇಶನ ನೀಡಲು ಕೋರಿದೆ.**
3. ಸಂಬಂಧಪಟ್ಟ ವಿಷಯಗಳ ಪರೀಕ್ಷಾ ಮಂಡಳಿ ಅಧ್ಯಕ್ಷರುಗಳಿಗೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು- **ಮೌಲ್ಯಮಾಪನ ಕಾರ್ಯಕ್ಕೆ ಗೈರುಹಾಜರಾಗುವ ಅಧ್ಯಾಪಕರುಗಳ ಪಟ್ಟಿಯನ್ನು ಈ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸುವುದು.**
4. ವಿಶೇಷಾಧಿಕಾರಿಗಳು, ಪರೀಕ್ಷಾ ಸುಧಾರಣಾ ಘಟಕ, ಪರೀಕ್ಷಾ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಮಾನ್ಯ ಕುಲಪತಿಗಳ / ಕುಲಸಚಿವರ / ಕುಲಸಚಿವ(ಪರೀಕ್ಷಾಂಗ) / ಹಣಕಾಸು ಅಧಿಕಾರಿ ಇವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಕಛೇರಿ ಪ್ರತಿ.

E:8.4/Kannada Letters/Ja

375